## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ | 141 |
| 2) | ಮಾನ್ಯ ಸದಸ್ಯರ ಹೆಸರು | ಡಾ. ಉಮಾಶ್ರೀ (ನಾಮನಿರ್ದೇಶಿತರು ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 08.12.2025 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯವನ್ನು ಕೌಶಲ್ಯಾಭಿವೃದ್ಧಿ ಕೇಂದ್ರವಾಗಿ ಪರಿವರ್ತಿಸುವ ಗುರಿ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲಾಗುತ್ತಿದೆ: | ಹೌದು.<br><br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯನ್ನು 2016-17ನೇ ಸಾಲಿನಲ್ಲಿ ಸ್ಥಾಪಿಸಲಾಗಿದ್ದು, ಇಲಾಖೆಯಡಿ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ (ಐ.ಟಿ.ಐ) / ಕೆ.ಜಿ.ಟಿ.ಟಿ.ಐ / ಕೆ.ಜಿ.ಎಂ.ಎಸ್.ಡಿ.ಸಿ / ಜಿ.ಟಿ.ಟಿ.ಸಿ/ ಮೋಕ್ಷಗೊಂಡಂ ತರಬೇತಿ ಸಂಸ್ಥೆ / ರಾಷ್ಟ್ರೀಯ ಜೀವನೋಪಾಯ ಮಿಷನ್ (ಗ್ರಾ/ನ) /ಕೆ.ಎಸ್.ಡಿ.ಸಿ ಗಳನ್ನು ಒಳಗೊಂಡಿರುತ್ತದೆ.<br><br>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ರಾಜ್ಯವನ್ನು ಕೌಶಲ್ಯಾಭಿವೃದ್ಧಿ ಕೇಂದ್ರವಾಗಿ ಪರಿವರ್ತಿಸುವ ನಿಟ್ಟಿನಲ್ಲಿ ಈ ಕೆಳಕಂಡ ಕ್ರಮಗಳನ್ನು ವಹಿಸಲಾಗಿದೆ.<br><br>1. <u>ಕೌಶಲ್ಯ ನೀತಿ</u>: ಕೌಶಲ್ಯಾಭಿವೃದ್ಧಿಯ ಪ್ರಕ್ರಿಯೆಗಳನ್ನು ಏಕರೂಪಗೊಳಿಸುವ ನಿಟ್ಟಿನಲ್ಲಿ ಎಲ್ಲಾ ಭಾಗಿದಾರರನ್ನು ಒಳಗೊಂಡಂತೆ ನೀತಿಯನ್ನು ರೂಪಿಸಲಾಗಿದೆ.<br><br>2. <u>ಸಿ.ಎಂ.ಕೆ.ಕೆ.ವೈ 2.0</u>: ಯೋಜನೆಯನ್ನು ಪರಿಣಾಮಕಾರಿಯಾಗಿ ಹಾಗೂ ತ್ವರಿತವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಆಯವ್ಯಯ ಘೋಷಣೆಯಂತೆ ಕ್ರಮವಹಿಸಲಾಗುತ್ತಿದೆ.<br><br>3. <u>Industry Linkage Cell ಮತ್ತು Future Skills</u>: ಯುವಕರಿಗೆ ಭವಿಷ್ಯದ ಕೌಶಲ್ಯ (Future Skills) ತರಬೇತಿಗಳನ್ನು ಕೈಗಾರಿಕೆ ಆಧಾರಿತ ಬೇಡಿಕೆ ಅನುಸಾರ ನೀಡುವುದು ಹಾಗೂ ಉದ್ಯೋಗಾವಕಾಶ ಒದಗಿಸುವುದು.<br><br>4. <u>ಕರ್ನಾಟಕ ಸ್ಕಿಲ್ ಒಲಂಪಿಕ್ಸ್</u>: ಅಂತರಾಷ್ಟ್ರೀಯ ಕೌಶಲ್ಯ ಸ್ಪರ್ಧೆಗೆ ಹಾಗೂ ರಾಷ್ಟ್ರೀಯ ಕೌಶಲ್ಯ ಸ್ಪರ್ಧೆಗೆ ಪೂರಕವಾಗಿ ಕೌಶಲ್ಯ ಒಲಂಪಿಕ್ಸ್ ಮೂಲಕ ರಾಜ್ಯದ ಯುವ ಜನತೆಗೆ ಸ್ಪರ್ಧೆಯಲ್ಲಿ ಭಾಗವಹಿಸಲು ಪ್ರೇರೇಪಿಸುವುದು.<br><br>5. <u>ವಿದೇಶಿ ಭಾಷಾ ತರಬೇತಿ</u> : ಅಂತರಾಷ್ಟ್ರೀಯ ಮಟ್ಟದಲ್ಲಿ ವಿವಿಧ ಉದ್ಯೋಗಾವಕಾಶಗಳನ್ನು ಪಡೆಯಲು ಜರ್ಮನ್, ಇಂಗ್ಲೀಷ್, ಸ್ಪ್ಯಾನಿಷ್ ಹಾಗೂ ಇತರೆ ಭಾಷೆಗಳಲ್ಲಿ ತರಬೇತಿ ನೀಡಲು ಕ್ರಮವಹಿಸಲಾಗುತ್ತಿದೆ. |

| | |
|---|---|
| | 6. **<u>ಕಲಿಕೆ ಜೊತೆ ಕೌಶಲ್ಯ</u>** : ಪದವಿ ತರಗತಿಗಳಲ್ಲಿ ಕೌಶಲ್ಯ ಸುಧಾರಿತ ಕಲಿಕೆ ಜೊತೆ ಕೌಶಲ್ಯ ಕಾರ್ಯಕ್ರಮದಡಿ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ 50 ಗಂಟೆಗಳ ಕೈಗಾರಿಕಾ ಆಧಾರಿತ ತರಬೇತಿ ನೀಡಲಾಗುತ್ತಿದೆ. |
| (ಆ) ಯಾವ ಉದ್ದೇಶಕ್ಕಾಗಿ ಈ ನೀತಿಯನ್ನು ಜಾರಿಗೆ ತರಲಾಗಿದೆ? ಈ ಯೋಜನೆ ಜಾರಿಯಿಂದ ರಾಜ್ಯದ ಎಷ್ಟು ಯುವ ಜನರಿಗೆ ಉದ್ಯೋಗ ಸಿಗಲಿದೆ: | ರಾಜ್ಯವನ್ನು ಕೌಶಲ್ಯಪೂರ್ಣ ಜಾಗತಿಕ ತಾಣವನ್ನಾಗಿ ಮಾಡುವುದರೊಂದಿಗೆ ಡಿಜಿಟಲ್ ತಂತ್ರಜ್ಞಾನ ಹಾಗೂ ಕೃತಕ ಬುದ್ಧಿಮತ್ತೆ (AI) ಬಳಕೆ ಮೂಲಕ ಉದ್ಯೋಗ ಮಾರ್ಗದರ್ಶನ, ತರಬೇತಿ ಮತ್ತು ಮೌಲ್ಯಮಾಪನ ಮಾಡುವುದು ಹಾಗೂ ಉದ್ಯೋಗಕ್ಕೆ ಅಗತ್ಯವಾದ ಕೌಶಲ್ಯಗಳನ್ನು ಒದಗಿಸುವುದರ ಜೊತೆಗೆ ಉದ್ಯಮಶೀಲತೆ ಮತ್ತು ಅಂತರರಾಷ್ಟ್ರೀಯ ಉದ್ಯೋಗಾವಕಾಶಗಳನ್ನು ಉತ್ತೇಜಿಸುವುದಾಗಿದೆ ಹಾಗೂ ಸ್ವಯಂ ಉದ್ಯೋಗ ಮತ್ತು ಉದ್ಯಮಶೀಲತೆಯನ್ನು ಕೌಶಲ್ಯದೊಂದಿಗೆ ಪ್ರೋತ್ಸಾಹಿಸುವುದಾಗಿದೆ. 2032ರ ವೇಳೆಗೆ 3 ದಶಲಕ್ಷ (ಮಿಲಿಯನ್) ಯುವಕರಿಗೆ ತರಬೇತಿ ನೀಡುವ ಗುರಿ ಹೊಂದಲಾಗಿದ್ದು, ಉದ್ಯೋಗಾವಕಾಶ ಮತ್ತು ಉದ್ಯಮಶೀಲತೆಯನ್ನು ಹೆಚ್ಚಿಸುವತ್ತ ಗಮನಹರಿಸಲಾಗಿದೆ. |
| (ಇ) ಯೋಜನೆಯಡಿ ಯಾವ ಯಾವ ಕ್ಷೇತಕ್ಕೆ ಎಷ್ಟು ಅನುದಾನ ನೀಡಲಾಗುತ್ತಿದೆ? | ಕಾರ್ಯಕ್ರಮ / ಯೋಜನೆವಾರು ಅನುದಾನ ಬಿಡುಗಡೆ ಮಾಡಲಾಗುವುದೇ ವಿನಃ ಕ್ಷೇತ್ರವಾರು ಯಾವುದೇ ಅನುದಾನವನ್ನು ಬಿಡುಗಡೆ ಮಾಡಲಾಗುವುದಿಲ್ಲ. |

ಸಂಖ್ಯೆ: ಕೌಉಜೀಇ 29 ಕೌಗುಪ್ರ 2025

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.